# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**<u>ಸಿ.ಸಿ. ಸಂಖ್ಯೆಃ 802/2019</u>**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 1. ಶಿವೇಗೌಡ, ತಂದೆ - ಲೇಟ್ ಕರೀಗೌಡ
ಸುಮಾರು 58 ವರ್ಷ ವಯಸ್ಸು,

ಎ 2. ಸಂಜಯ, ತಂದೆ - ಶಿವೇಗೌಡ
ಸುಮಾರು 22 ವರ್ಷ ವಯಸ್ಸು,

ಎ 3. ರತ್ನಮ್ಮ, ಗಂಡ - ಶಿವೇಗೌಡ
ಸುಮಾರು 45 ವರ್ಷ ವಯಸ್ಸು,

ಎ 4. ಚಂದ್ರಹಾಸ @ ಚಂದ್ರು
ತಂದೆ - ಶಿವೇಗೌಡ
ಸುಮಾರು 24 ವರ್ಷ ವಯಸ್ಸು,
ಎಲ್ಲರೂ ಬೂಚಹಳ್ಳಿ ಗ್ರಾಮದ ವಾಸಿಗಳು,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

## <u>ದೋಷಾರೋಪಣೆ</u>

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 21.01.2017 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಬೂಚಳ್ಳಿ ಗ್ರಾಮದ 1 ನೇ ಆರೋಪಿಯಾದ ನಿಮ್ಮ ವಾಸದ ಮನೆಯ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ 1 ನೇ ಆರೋಪಿಯಾದ ನೀವು ಸಾಕ್ಷಿ 4 ರವರೊಂದಿಗೆ ತಕರಾರಿದ್ದ

ಜಮೀನನ್ನು ಅಳತೆ ಮಾಡಿಸಲು ಬಂದಿದ್ದಾಗ ಸಾಕ್ಷಿ 4 ರವರು 1 ನೇ ಆರೋಪಿಯಾದ ನಿಮ್ಮನ್ನು ಉದ್ದೇಶಿಸಿ ತನಗೆ ನೋಟಿಸ್ ನೀಡದೆ ಹೇಗೆ ಅಳತೆ ಮಾಡಿಸುತ್ತೀರಾ ಎಂದು ಕೇಳಿದ್ದಕ್ಕೆ 1 ನೇ ಆರೋಪಿಯಾದ ನೀವು ಸಾಕ್ಷಿ 4 ರವರಿಗೆ ಬೋಳಿ ಮಗನೆ , ಸೂಳೆ ಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು , ಸ್ಥಳಕ್ಕೆ ಬಂದ 2 ರಿಂದ 4 ನೇ ಆರೋಪಿಗಳು ಸಾಕ್ಷಿ 1 ಮತ್ತು 4 ರವರಿಗೆ ಬೋಳಿ ಮಕ್ಕಳೇ , ಸೂಳೆ ಮಕ್ಕಳೆ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 4 ನೇ ಆರೋಪಿಗಳಾದ ನೀವುಗಳು ಅಪರಾದ ಮಾಡುವ ಸಮಾನ ಉದ್ದೇಶವುಳ್ಳವರಾಗಿದ್ದು, 1 ನೇ ಆರೋಪಿಯಾದ ನೀವು ಸಾಕ್ಷಿ 4 ರವರಿಗೆ ಮಾರಕಾಸ್ತ್ರವಾದ ದೊಣ್ಣೆಯಿಂದ ಎಡಬುಜಕ್ಕೆ ಹೊಡೆದಿದ್ದು, 2 ನೇ ಆರೋಪಿಯಾದ ನೀವು ಸಾಕ್ಷಿ 1 ಅವರಿಗೆ ಮಾರಕಾಸ್ತ್ರವಾದ ಕಲ್ಲಿನಿಂದ ಬಲ ಬುಜಕ್ಕೆ ಹೊಡೆದು ಸಾಮಾನ್ಯ ಸ್ವರೂಪದ ಸ್ವರೂಪದ ಗಾಯವನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 4 ನೇ ಆರೋಪಿಗಳಾದ ನೀವುಗಳು ಅಪರಾದ ಮಾಡುವ ಸಮಾನ ಉದ್ದೇಶವುಳ್ಳವರಾಗಿದ್ದು, 3 ನೇ ಆರೋಪಿಯಾದ ನೀವು ಕೈಗಳಿಂದ ಸಾಕ್ಷಿ 1 ಅವರ ಬೆನ್ನಿಗೆ ಮತ್ತು ಸಾಕ್ಷಿ-4 ಅವರ ಬೆನ್ನಿಗೆ ಹಾಗೂ ಬಲ ಕೈಗೆ ಹೊಡೆದು ಸಾಮಾನ್ಯ ಸ್ವರೂಪದ ನೋವನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**
ದಿನಾಂಕಃ **02.11.2023**
ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 802/2019**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 4. ಚಂದ್ರಹಾಸ @ ಚಂದ್ರು
ತಂದೆ - ಶಿವೇಗೌಡ

**ಭಾರತೀಯ ದಂಡ ಸಂಹಿತೆ ಕಲಂ 240(2) ರ ಅಡಿಯಲ್ಲಿ ಆರೋಪಿಯ ಹೇಳಿಕೆ**

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ದಿನಾಂಕಃ **02.11.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.